## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮದ ಯೋಜನೆಗಳಿಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆ ಸಂಖ್ಯೆ:ಕೆಎಸಿಡಿಸಿ/ಎಡಿಎಂಒಜಿಪಿ(ಎಪಿ-21)1/2021-22, ದಿನಾಂಕ:28.07.2021.
2. ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ/518/ವೆಚ್ಚ-3/2021 ದಿನಾಂಕ:09.12.2021

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರು 8ನೇ ನಿರ್ದೇಶಕ ಮಂಡಳಿಯ ಸಭೆಯ ಅನುಮೋದನೆಯಂತೆ ಕರ್ನಾಟಕ ಆರ್ಯವೈಶ್ಯ ಅಭಿವೃಧ್ಧಿ ನಿಗಮದಿಂದ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದ ಆರ್ಯವೈಶ್ಯ ಆಹಾರ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ ಇತ್ಯಾದಿ ಹೊಸ ಕಾರ್ಯಕ್ರಮಗಳಿಗೆ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ ಮತ್ತು ವಾಸವಿ ಜಲಶಕ್ತಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 436 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 31-03-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸಲು ಉದ್ದೇಶಿಸಿರುವ ವಾಸವಿ ಜಲ ಶಕ್ತಿ ಯೋಜನೆ ಹಾಗೂ ಆರ್ಯವೈಶ್ಯ ಆಹಾರ ವಾಹಿನಿ ಯೋಜನೆಗಳನ್ನು ಈ ಕೆಳಕಂಡ ಮಾರ್ಗಸೂಚಿಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

**ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವಾಸವಿ ಜಲಶಕ್ತಿ ಯೋಜನೆಯ ಮಾರ್ಗಸೂಚಿಗಳು:-**

1. **ಯೋಜನೆ ಉದ್ದೇಶ:-** ಆರ್ಯ ವೈಶ್ಯ ಸಮುದಾಯದಲ್ಲಿ ಇರುವ ಸಣ್ಣ ರೈತರಿಗೆ ಕೃಷಿ ಅಭಿವೃದ್ಧಿಗಾಗಿ ನೀರಾವರಿ ಸೌಲಭ್ಯವನ್ನು ಒದಗಿಸುವುದು ವಾಸವಿ ಜಲಶಕ್ತಿ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಡಿಯಲ್ಲಿ ರೈತರು ಹೊಂದಿರುವ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಇಲ್ಲದಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು, ಪಂಪ್‌ಸೆಟ್ ಅಳವಡಿಸುವುದು ಮತ್ತು ವಿದ್ಯುದ್ದೀಕರಣವನ್ನು ಮಾಡಿಸಲು ಅತೀ ಕಡಿಮೆ ಬಡ್ಡಿ ದರ ಶೇ. 4 ರಂತೆ ಗರಿಷ್ಠ ರೂ. 2.00 ಲಕ್ಷ ಸಾಲ ಹಾಗೂ ವಿದ್ಯುದ್ದೀಕರಣಕ್ಕೆ ರೂ.50,000/- ಸಹಾಯಧನ ನೀಡಿ ಕೃಷಿಗೆ ಅನುವಾಗುವಂತೆ ನೆರವು ನೀಡಲಾಗುವುದು.

2. **ಅರ್ಜಿದಾರರು ಹೊಂದಿರಬೇಕಾದ ಅರ್ಹತೆಗಳು:**

i. **ಜಾತಿ ಪ್ರಮಾಣ ಪತ್ರ:** ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು. (ನಮೂನೆ-ಜಿ ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು)

...2

31/3/22

ii. **ಆದಾಯ ಮಿತಿ:** ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6,00,000/-ಗಳ ಮಿತಿ ಒಳಗಿರಬೇಕು.

iii. **ವಯೋಮಿತಿ:** ಅರ್ಜಿದಾರರು 21 ವರ್ಷ ಮೇಲ್ಪಟ್ಟು 50 ವರ್ಷ ಒಳಗಿನವರಾಗಿರಬೇಕು.

iv. **ಭೂಮಿ ವಿಸ್ತೀರ್ಣ:** ಅರ್ಜಿದಾರರು ಸಣ್ಣ ರೈತರ ಕುಟುಂಬಕ್ಕೆ ಸೇರಿದವರಾಗಿದ್ದು, ಒಂದೇ ಸ್ಥಳದಲ್ಲಿ ಇರುವ ಕನಿಷ್ಠ 2 ಮತ್ತು ಗರಿಷ್ಠ 5 ಎಕರೆ ಜಮೀನು ಹೊಂದಿರಬೇಕು.

v. ಅರ್ಜಿದಾರರು ವ್ಯವಸಾಯ ವೃತ್ತಿಯನ್ನು ನಿರ್ವಹಿಸುತ್ತಿರಬೇಕು.

vi. **ವಿಳಾಸ:** ಅರ್ಜಿದಾರರು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು.

vii. **ಮಹಿಳೆಯರ ಮೀಸಲಾತಿ**: ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಶೇ.33 ರಷ್ಟು ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ವಿಧವೆಯರಿಗೆ ಪ್ರಥಮ ಆದ್ಯತೆಯನ್ನು ನೀಡಬೇಕು.

viii. **ವಿಶೇಷಚೇತನರ (ಅಂಗವಿಕಲರ) ಮೀಸಲಾತಿ:** ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಶೇ.5 ರಷ್ಟು ವಿಶೇಷಚೇತನ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು.

ix. **ತೃತೀಯ ಲಿಂಗಿಗಳ ಮೀಸಲಾತಿ:** ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಶೇ.5 ರಷ್ಟು ತೃತೀಯ ಲಿಂಗ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು. (ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸದರಿ ಮೀಸಲಾತಿಯನ್ನು ಇತರೆ ಅಭ್ಯರ್ಥಿಗಳಿಗೆ ವರ್ಗಾಯಿಸುವುದು.)

x. ಒಂದು ಕುಟುಂಬದಲ್ಲಿ ಒಂದು ಅಭ್ಯರ್ಥಿಗೆ ಮಾತ್ರ ಅವಕಾಶವಿರುತ್ತದೆ.

xi. ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಕಾರ್ಡ್ ಹೊಂದಿರಬೇಕು.

xii. ಈ ಯೋಜನೆ ಅಡಿಯಲ್ಲಿ ಸಾಲವನ್ನು ಭದ್ರತೆ ರಹಿತವಾಗಿ (Collateral Security Free Loan) ನೀಡಲಾಗುವುದು.

xiii. ನಿಗಮದ ನಿರ್ದೇಶಕ ಮಂಡಳಿಯು ಕಾಲಕಾಲಕ್ಕೆ ವಿಧಿಸುವ ಇನ್ನಿತರೆ ಹೆಚ್ಚಿನ ಅರ್ಹತೆಗಳನ್ನು ಹೊಂದಿರಬೇಕು.

3. **<u>ಅರ್ಜಿದಾರರು ಸಲ್ಲಿಸಬೇಕಾದ ದಾಖಲೆಗಳು</u>:** ಈ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯುವಂತಹ ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದರೊಂದಿಗೆ ಈ ಕೆಳಕಂಡ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು.

i. ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದಂತೆ “ನಮೂನೆ-ಜಿ” ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.

ii. ಅರ್ಜಿದಾರರು ಸಣ್ಣ ರೈತರಾಗಿರುವ ಬಗ್ಗೆ ಹಾಗೂ ನೀರಾವರಿ ಸೌಲಭ್ಯ ಹೊಂದಿಲ್ಲದೇ ಇರುವ ಬಗ್ಗೆ ಕಂದಾಯ ಅಧಿಕಾರಿಗಳಿಂದ ಪಡೆದ ಧೃಡೀಕರಣ ಪತ್ರ.

iii. ಅರ್ಜಿದಾರರು ಹೊಂದಿರುವ ಜಮೀನಿನ ಕಂದಾಯ ದಾಖಲೆಗಳಾದ ಆರ್.ಟಿ.ಸಿ/ ಪಹಣಿ, ಖಾತಾ ಉತಾರ, ಪಟ್ಟಾಪುಸ್ತಕ, ಮ್ಯುಟೇಶನ್, ಇ.ಸಿ, ವಂಶವೃಕ್ಷ, ಜಮೀನಿನ ಚೆಕ್‌ಬಂದಿ **ಹಾಗೂ ಅರ್ಜಿದಾರನು ತನ್ನ ಜಮೀನಿನಲ್ಲಿ ನಿಂತಿರುವ ಜಿಯೋ ಸ್ಟ್ಯಾಂಪ್ ಫೋಟೋ.**

iv. ಅರ್ಜಿದಾರರು ನೀರಾವರಿ ಸೌಲಭ್ಯ ಹೊಂದಿಲ್ಲದೇ ಇರುವುದಕ್ಕೆ ಸಂಬಂಧಪಟ್ಟ ಕಂದಾಯ ಅಧಿಕಾರಿಯಿಂದ ದೃಢೀಕರಣ ಪತ್ರ.

v. ಸಾಲವು ಘಟಕ ವೆಚ್ಚ ರೂ.2.00 ಲಕ್ಷಗಳಿಗಿಂತ ಹೆಚ್ಚಿದ್ದಲ್ಲಿ ಫಲಾನುಭವಿಯು ಸ್ವಂತ ವೆಚ್ಚದಲ್ಲಿ ಭರಿಸುವುದಾಗಿ ಸ್ವಯಂ ಘೋಷಣಾ ಪತ್ರವನ್ನು ನೀಡತಕ್ಕದ್ದು.

vi. ಅರ್ಜಿದಾರರ ಜಮೀನಿನಲ್ಲಿ ಸೂಕ್ತ ಜಲಬಿಂಧು ದೊರೆಯುವ ಬಗ್ಗೆ ಭೂವಿಜ್ಞಾನಿಗಳು ಅಂತರ್ಜಲ ಇಲಾಖೆ ರವರು ನೀಡಿದ ಭೂಭೌತ ಸರ್ವೆ ವರದಿ ಸಲ್ಲಿಸಬೇಕು.

vii. ಯೋಜನೆಗೆ ಪೂರಕವಾದ ಮೇಲಿನಂತೆ ದಾಖಲೆಗಳನ್ನು ಹೊರತುಪಡಿಸಿ ಇನ್ನೂ ಹೆಚ್ಚಿನ ದಾಖಲಾತಿಗಳು ಅವಶ್ಯವಿದ್ದಲ್ಲಿ ಆಡಳಿತ ಮಂಡಳಿ ತೀರ್ಮಾನದಂತೆ ವ್ಯವಸ್ಥಾಪಕ ನಿರ್ದೇಶಕರು ಆಗಿಂದಾಗ್ಗೆ ಹೊರಡಿಸುವ ಆದೇಶಗಳನ್ವಯ ಸಲ್ಲಿಸತಕ್ಕದ್ದು.

31/3/22